ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 17ನೇ ಜುಲೈ, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೈದನೇ ಪಟ್ಟಿ

ಆ) ದಿನಾಂಕ 14.07.2015ರ ಹನ್ನೆರಡನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಟಿ.ರಘುಮೂರ್ತಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 171(2235) : ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೈದನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ, (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು:- 2014-15ನೇ ಸಾಲಿನ ಅರ್ಜಿಗಳ ಸಮಿತಿಯ ಹತ್ತೊಂಭತ್ತನೇ ವರದಿಯನ್ನೊಪ್ಪಿಸುವುದು.

3. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) **ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕ, 2015**
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು;

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ

(ii) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕ, 2015
ಶ್ರೀ ಕೃಷ್ಣ ಭೈರೇಗೌಡ (ಕೃಷಿ ರಾಜ್ಯ ಸಚಿವರು) ಅವರು:

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ:

ಬೇಡಿಕೆ ಸಂಖ್ಯೆ	ಬೇಡಿಕೆಗಳ ಹೆಸರು
21	ಜಲಸಂಪನ್ಮೂಲ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
18	ವಾಣಿಜ್ಯ ಮತ್ತು ಕೈಗಾರಿಕೆ
24	ಇಂಧನ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು
17	ಶಿಕ್ಷಣ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
14	ಕಂದಾಯ
05	ಒಳಾಡಳಿತ ಮತ್ತು ಸಾರಿಗೆ
16	ವಸತಿ
19	ನಗರಾಭಿವೃದ್ಧಿ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
10	ಸಮಾಜ ಕಲ್ಯಾಣ
15	ಮಾಹಿತಿ ತಂತ್ರಜ್ಞಾನ

ಮು.ತಿ.ನೋ.,.

26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
13	ಆಹಾರ ಮತ್ತು ನಾಗರೀಕ ಸರಬರಾಜು
06	ಮೂಲಭೂತ ಸೌಕರ್ಯ ಅಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
23	ಕಾರ್ಮಿಕ

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಹಾಗೂ ಶ್ರೀ ಬಿ.ಆರ್. ಪಾಟೀಲ್ ಅವರುಗಳು ರಾಜ್ಯದ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಉದ್ಯೋಗದಲ್ಲಿರುವ ಮಹಿಳೆಯರಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ಶ್ರೀಯುತರುಗಳಾದ ಹೆಚ್.ಕೆ.ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ಕೆ.ಜಿ.ಬೋಪಯ್ಯ, ವಿಶ್ವೇಶ್ವರ ಹೆಗಡೆ ಕಾಗೇರಿ, ಸಿ.ಟಿ.ರವಿ ಹಾಗೂ ಇತರರು ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ ಮತ್ತು ಕಾರವಾರ ಜಿಲ್ಲೆಗಳಲ್ಲಿ ಬಿದ್ದ ಭಾರೀ ಮಳೆ ಮತ್ತು ಬಿರುಗಾಳಿಯಿಂದಾಗಿ ಬೆಳೆ ನಾಶವಾಗಿ ರೈತರಿಗೆ ಉಂಟಾಗಿರುವ ನಷ್ಟಕ್ಕೆ ಪರಿಹಾರ ನೀಡಲು ವಿಶೇಷ ಪ್ಯಾಕೇಜ್ ಘೋಷಿಸುವಂತೆ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು 2003 ರಿಂದ ರಾಜ್ಯದ ವಿವಿಧ ವಿದ್ಯುತ್ ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ವಿದ್ಯುತ್ ಪ್ರತಿನಿಧಿಗಳ ವೇತನ ಹೆಚ್ಚಿಸುವ ಮತ್ತು ಅವರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

2. ಶ್ರೀ ಸಿ.ಟಿ. ರವಿ ಅವರು ರಾಜ್ಯದ ಧಾರವಾಡ, ಬೆಂಗಳೂರು ಹಾಗೂ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಡಿಪ್ಲೋಮ ಕೃಷಿ ಪದವೀಧರರನ್ನು ಖಾಲಿಯಿರುವ ಕೃಷಿ ಸಹಾಯಕ ಹುದ್ದೆಗಳಿಗೆ ನೇಮಕ ಮಾಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

3. ಶ್ರೀ ವಿಶ್ವನಾಥ(ಆನಂದ) ಚಂದ್ರಶೇಖರ ಮಾಮನಿ ಅವರು 2013-14 ಹಾಗೂ 2014-15ನೇ ಸಾಲಿನಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸವದತ್ತಿ ಎಲ್ಲಮ್ಮ ವಿಧಾನಸಭಾ ಕ್ಷೇತ್ರಕ್ಕೆ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳ ಬಗ್ಗೆ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4. ಶ್ರೀ ಜೆ.ಆರ್. ಲೋಬೋ ಅವರು ಬಾಯ್ಲರ್ ಇಲಾಖೆಯಲ್ಲಿದ್ದ ಹಿರಿಯ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಮಂಗಳೂರಿನಲ್ಲಿಯೇ ಮುಂದುವರೆಸಿ ಸೂಕ್ತ ಅಧಿಕಾರಿಯನ್ನು ನೇಮಿಸುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಟಿ. ರಘುಮೂರ್ತಿ ಅವರು ದಾವಣಗೆರೆಯ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ವೇತನ ನೀಡದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

6. ಡಾ॥ ಅಜಯ ಸಿಂಗ್ ಅವರು ಕಲಬುರಗಿ ಜಿಲ್ಲೆ ಜೇವರ್ಗಿ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರಿ ಠಾಣೆ ಪ್ರಾರಂಭ ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

7. ಶ್ರೀ ಬಿ.ಎನ್. ವಿಜಯಕುಮಾರ್ ಅವರು ಬೆಂಗಳೂರು ನಗರದಲ್ಲಿ ವಶಪಡಿಸಿಕೊಳ್ಳಲಾದ ವಾಹನಗಳನ್ನು ಫುಟ್‌ಪಾತ್‌ಗಳ ಮೇಲೆ ನಿಲ್ಲಿಸಿರುವುದರಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8. ಶ್ರೀ ರಮೇಶ್ ಬಿ. ಭೂಸನೂರು ಅವರು ವಿಜಯಪುರ ಜಿಲ್ಲೆಯ ಸಿಂಧಗಿ ಪೊಲೀಸ್ ಠಾಣೆಯಲ್ಲಿ ನಾಗವಿ ತಾಂಡಾದವರ ಮೇಲೆ ದಾಖಲಾಗಿದ್ದ ಮೊಕದ್ದಮೆಗಳನ್ನು ಹಿಂತೆಗೆದುಕೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

9. ಶ್ರೀ ವಿ. ಸುನೀಲ್ ಕುಮಾರ್ ಅವರು ಉಡುಪಿ ಜಿಲ್ಲೆಯ ತಾಲ್ಲೂಕು ಕಛೇರಿ ಹಾಗೂ ನಾಡಕಛೇರಿಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಆಧಾರ್ ಕಾರ್ಡ್ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವಲ್ಲಿ ಜನಸಾಮಾನ್ಯರಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್. ಎಸ್.ಶಿವಶಂಕರ್ ಅವರು ಹರಿಹರ ನಗರಕ್ಕೆ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

11. ಶ್ರೀ ಬಸವರಾಜ್ ನೀಲಪ್ಪ ಶಿವಣ್ಣನವರ ಅವರು ಬ್ಯಾಡಗಿ ಪಟ್ಟಣದಲ್ಲಿ 2011-12ನೇ ಸಾಲಿನಲ್ಲಿ ಮಂಜೂರಾದ 2ನೇ ಹಂತದ ಕುಡಿಯುವ ನೀರು ಸರಬರಾಜು ಯೋಜನೆ ಪೂರ್ಣಗೊಂಡಿದ್ದರೂ ಸಹ ನೀರು ಸರಬರಾಜು ಮಾಡದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಎಂ ಕೃಷ್ಣಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಅಕ್ರಮ-ಸಕ್ರಮ ಯೋಜನೆಯಡಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

13. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ರೈತರು ಅಕ್ಕಪಕ್ಕದ ಜಮೀನುಗಳಲ್ಲಿ ಓಡಾಡಲು ದಾರಿ ಇಲ್ಲದೆ ಇರುವುದರಿಂದ ಉಂಟಾಗುತ್ತಿರುವ ತೊಂದರೆಯನ್ನು ಪರಿಹರಿಸಲು ನಿಯಮಗಳನ್ನು ರೂಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

14. ಶ್ರೀ ಸಾ.ರಾ. ಮಹೇಶ್ ಅವರು ತುಮಕೂರಿನ ಶ್ರೀ ಸಿದ್ಧಗಂಗಾ ಮಠದ ಶ್ರೀಗಳಾದ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳಿಗೆ ಭಾರತ ರತ್ನ ಪ್ರಶಸ್ತಿ ನೀಡಲು ಶಿಫಾರಸ್ಸು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

15. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು ತರಿಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಭದ್ರಾ ಜಲಾಶಯದ ಮುಂಭಾಗದಲ್ಲಿ ಕೆ.ಆರ್.ಎಸ್. ಮಾದರಿಯಲ್ಲಿ ಬೃಂದಾವನವನ್ನು ನಿರ್ಮಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ಬಸವನ ಬಾಗೇವಾಡಿ ತಾಲ್ಲೂಕಿನ ಕೂಡಗಿಯ ಸೂಪರ್ ಥರ್ಮಲ್ ಪವರ್ ಘಟಕದ ಎದುರು ನಡೆದ ಗೋಲಿಬಾರಿಗೆ ಗುರಿಯಾದ ರೈತರ ವಿರುದ್ಧದ ಮೊಕದ್ದಮೆಗಳನ್ನು ಹಿಂಪಡೆಯುವ ಹಾಗೂ ಪರಿಹಾರ ಧನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

17. ಶ್ರೀ ಎಂ.ಪಿ.ಅಪ್ಪಚ್ಚು ರಂಜನ್ ಅವರು ರಾಜ್ಯದಲ್ಲಿ ರೈತ ಸಂಪರ್ಕ ಕೇಂದ್ರಗಳಿಂದ ಭೂಸಾರ ಸಂರಕ್ಷಣೆಗಾಗಿ ವಿತರಿಸಲಾಗುತ್ತಿರುವ ಡಾಲೋಮೆಟ್ ಸುಣ್ಣದ ಸರಬರಾಜಿನಲ್ಲಿ ಅಕ್ರಮ ನಡೆಯುತ್ತಿರುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಎನ್.ಹೆಚ್. ಕೋನರಡ್ಡಿ ಅವರು ರಾಜ್ಯದಲ್ಲಿ ಕಾನೂನುಬದ್ಧವಾಗಿ ಮರಳು ಸಾಗಾಣಿಕೆಗೆ ಅನುಮತಿ ನೀಡದಿರುವುದರಿಂದ ಕಾಳಸಂತೆಯಲ್ಲಿ ಖರೀದಿಸಬೇಕಾಗಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

19. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಮತ್ತು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಮತ್ತು ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

20. ಶ್ರೀ ಪ್ರತಾಪಗೌಡ ಪಾಟೀಲ್ ಅವರು ಮಸ್ಕಿ ವಿಧಾನಸಭಾ ಕ್ಷೇತ್ರದ ಸಿಂಧನೂರು ತಾಲ್ಲೂಕಿನ ದುರ್ಗಾ ಕ್ಯಾಂಪಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದ ಕೃಷಿ ಕಾರ್ಮಿಕನ ಕುಟುಂಬಕ್ಕೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

21. ಶ್ರೀ ಕೆ.ಬಿ.ಪ್ರಸನ್ನಕುಮಾರ್ ಅವರು ಬೆಂಗಳೂರು ನಗರದಲ್ಲಿರುವ ಆನಂದರಾವ್ ವೃತ್ತದ ಪಕ್ಕದಲ್ಲಿ ಎರಡು ಖಾಸಗಿ ಬಸ್ ನಿಲ್ದಾಣಗಳು ಇರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

22. ಶ್ರೀ ವೈ.ಎಸ್.ವಿ.ದತ್ತಾ ಅವರು ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು 2010-11 ಮತ್ತು 2011-12ನೇ ಆರ್ಥಿಕ ಸಾಲುಗಳ ವಿಮಾ ಪಾಲಿಸಿಗಳಿಗೆ ಬೋನಸನ್ನು ವಿಳಂಬವಾಗಿ ಘೋಷಣೆ ಮಾಡಿರುವುದರಿಂದ ವಿಮಾದಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

23. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ಪಟ್ಟಣದಲ್ಲಿ ಅಂಬೇಡ್ಕರ್ ಭವನದ ಎರಡನೇ ಹಂತದ ಕಾಮಗಾರಿಗೆ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

24. ಶ್ರೀ ನಾರಾಯಣಗೌಡ ಅವರು ಕೃಷ್ಣರಾಜಪೇಟೆ ಪಟ್ಟಣ ಪೋಲೀಸ್ ಠಾಣೆಯಲ್ಲಿ ಲೋಕಾಯುಕ್ತರ ಸೂಚನೆ ಮೇರೆಗೆ ಸಿ.ಆರ್.ನಂ. 106/14ರ ಅಡಿ ದಾಖಲಾಗಿದ್ದ ಪ್ರಕರಣದ ತನಿಖೆ ಪೂರ್ಣವಾಗದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

25. ಶ್ರೀ ಹೆಚ್.ಡಿ.ರೇವಣ್ಣ ಅವರು ಕಪ್ಪು ಪಟ್ಟಿಗೆ ಸೇರಿಸಬೇಕಾದ ಗುತ್ತಿಗೆದಾರರಿಗೆ ಕಾಮಗಾರಿಗಳ ಗುತ್ತಿಗೆಯನ್ನು ನೀಡುತ್ತಿರುವುದರಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಉಂಟಾಗುತ್ತಿರುವ ನಷ್ಟದ ಬಗ್ಗೆ ಮಾನ್ಯ ಮುಖ್ಯ ಮಂತ್ರಿಯವರ ಗಮನ ಸೆಳೆಯುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Nagowda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)